MANDYA UNIVERSITY
Date 3/3/25
No. 1172
MANDYA-571401.

**ಕರ್ನಾಟಕ ಸರ್ಕಾರ**

ಆಯುಕ್ತರ ಕಛೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ನಂ.16.ಡಿ. ದೇವರಾಜ ಅರಸು ಭವನ 3ನೇ ಮಹಡಿ, ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ ಬೆಂಗಳೂರು 560052,
ದೂ.ಸಂ: 080 29505520, E mail id:bcwd.scholarship@karnataka.gov.in

ಸಂ: 1692327 BCWD-17/6/2025-BCWD_SCHLR BCWD ದಿನಾಂಕ:28.02.2025

**ಗೆ,**
ರಾಜ್ಯದ ಎಲ್ಲಾ ಉಪನಿರ್ದೇಶಕರು
ಮತ್ತು ಜಿಲ್ಲಾ ಹಿಂದುಳಿದ
ವರ್ಗಗಳ ಕಲ್ಯಾಣಾಧಿಕಾರಿಗಳಿಗೆ.

**ವಿಷಯ:** 2023-24ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, ಸ್ನಾತಕೋತ್ತರ ಪದವಿ, ವೃತ್ತಿಪರ ಪದವಿ, ಮತ್ತು ವೃತ್ತಿಪರ ಸ್ನಾತಕೋತ್ತರ ಪದವಿಗಳ ಕೋರ್ಸುಗಳಿಗೆ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ವಿಸ್ತರಿಸುವ ಬಗ್ಗೆ.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2023-24ನೇ ಸಾಲಿನಲ್ಲಿ ಸ್ನಾತಕೋತ್ತರ ಪದವಿ, ವೃತ್ತಿಪರ ಪದವಿ, ಮತ್ತು ವೃತ್ತಿಪರ ಸ್ನಾತಕೋತ್ತರ ಪದವಿಗಳ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ಮತ್ತು ಪ್ರವರ್ಗ-1 ರ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಗೆ ಕೌನ್ಸಲಿಂಗ್ ತಡವಾಗಿ ಪ್ರಾರಂಭವಾದ ಕೋರ್ಸುಗಳು ಮತ್ತು ಹಿಂದಿನ ಶೈಕ್ಷಣಿಕ ವರ್ಷದ ಫಲಿತಾಂಶ ನೀಡದ ಕೋರ್ಸುಗಳ ಅರ್ಜಿ ಸಲ್ಲಿಸದೆಯಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ದಿನಾಂಕ:15.03.2025 ರವರೆಗೆ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸುವ ಕುರಿತು ಪ್ರಕಟಣೆಯನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದೆ. ಸದರಿ ಪ್ರಕಟಣೆಯನ್ನು ಜಿಲ್ಲಾಮಟ್ಟದ ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ 3 ದಿನಗಳ ಕಾಲ ಪ್ರಚುರ ಪಡಿಸುವಂತೆ ಹಾಗೂ ಎಲ್ಲಾ ಸರ್ಕಾರದ ಕಛೇರಿಗಳು ಮತ್ತು ಕಾಲೇಜುಗಳು ಮತ್ತು ಕಾಲೇಜುಗಳ ನಾಮಫಲಕಗಳಲ್ಲಿ ಪ್ರಕಟಿಸಲು ಕ್ರಮವಹಿಸುವಂತೆ ಸೂಚಿಸಲಾಗಿದೆ.

ನಿಮ್ಮ ವಿಶ್ವಾಸಿ

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.

**ಪ್ರತಿಯನ್ನು ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ:**

1. ರಾಜ್ಯದ ಎಲ್ಲಾ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು (ಉಪನಿರ್ದೇಶಕರು ಮತ್ತು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಮೂಲಕ)

Scanned with OKEN Scanner

ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**

ನಂ.16/ಡಿ, 3ನೇ ಮಹಡಿ, ದೇವರಾಜ ಅರಸು ಭವನ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು-560052

ಸಂ: 1692327 BCWD-17/6/2025-BCWD SCHLR-BCWD

ದಿನಾಂಕ:28.02.2025

**ಪ್ರಕಟಣೆ**

2023-24 ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸುಗಳಾದ ಸ್ನಾತಕೋತ್ತರ ಪದವಿ, ವೃತ್ತಿಪರ ಪದವಿ ಮತ್ತು ವೃತ್ತಿಪರ ಸ್ನಾತಕೋತ್ತರ ಪದವಿಗಳ ಕೆಲ ಕೋರ್ಸುಗಳಿಗೆ ಕೌನ್ಸಲಿಂಗ್ ತಡವಾಗಿ ಪ್ರಾರಂಭವಾಗಿರುತ್ತದೆ ಮತ್ತು ಹಿಂದಿನ ಶೈಕ್ಷಣಿಕ ವರ್ಷದ ಫಲಿತಾಂಶ ತಡವಾಗಿ ನೀಡಿದ ಕಾರಣ ಇಲಾಖೆಯಿಂದ ನಿಗದಿಪಡಿಸಿದ ಅವಧಿಯೊಳಗೆ ಅರ್ಜಿ ಸಲ್ಲಿಸಲು ಸಾಧ್ಯವಾಗಿರುವುದಿಲ್ಲ. . ಆದ ಕಾರಣ ಈ ಕೋರ್ಸುಗಳ ವಿದ್ಯಾರ್ಥಿಗಳು ಇಲಾಖೆಗೆ ಮನವಿ ಸಲ್ಲಿಸಿದ್ದು , ಈ ಕೋರ್ಸುಗಳ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಅರ್ಜಿಸಲ್ಲಿಸಲು ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಅಂತಿಮ ದಿನಾಂಕವನ್ನು ದಿನಾಂಕ:15.03.2025ಕ್ಕೆ ನಿಗದಿಪಡಿಸಲಾಗಿದೆ ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಳ್ಳಲು ಸೂಚಿಸಿದೆ.

**ವಿ.ಸೂ :** ಸದರಿ ಅರ್ಜಿಗಳಿಗೆ ಆರ್ಥಿಕ ಇಲಾಖೆಯಿಂದ ಹೆಚ್ಚುವರಿ ಅನುದಾನ ಒದಗಿಸಿದ್ದಲ್ಲಿ 2023-24ನೇ ಸಾಲಿಗೆ ಶುಲ್ಕ ಮರುಪಾವತಿ ಮಾಡಲು ಕ್ರಮವಹಿಸಲಾಗುವುದು.

- **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:** 15.03.2025
- **ಆನ್‌ಲೈನ್ ಮೂಲಕ ಅರ್ಜಿಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ:** https://ssp.postmatric.karnataka.gov.in/
- **ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್ ಸೈಟ್ ವಿಳಾಸ:** https://bcwd.karnataka.gov.in
- **ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ:** 8050770005

  **ಇಮೇಲ್:** bcwdhelpline@gmail.com
- **ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್:** postmatrichelp@karnataka.gov.in

  **ದೂರವಾಣಿ ಸಂಖ್ಯೆ:** 1902

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.

Scanned with OKEN Scanner